ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಯ.ವಿ/ಆ.ಅ/47/2022–23

ಕಾರ್ಯಪಾಲಕ ಅಭಿಯಂತರವರ ಕಛೇರಿ
ಯಲಹಂಕ ವಿಭಾಗ, ಬೃ.ಬೆಂ.ಮ.ಪಾ.
ಬೆಂಗಳೂರು 64 ದಿನಾಂಕ: 28/03/2023

ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ

ವಿಷಯ:– "Drilling of borewells and providing water supply facilities to ward No 01,02,03 & 04."

ಉಲ್ಲೇಖ:–1) ವಿಶೇಷ ಆಯುಕ್ತರು,(ಯೋಜನೆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಸಂಖ್ಯೆ:1323/2022–23ರ ಆಡಳಿತಾತ್ಮಕ ಅನುಮೋದನೆ ದಿನಾಂಕ:28–03–2023

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ ಉಪ ವಿಭಾಗ) ರವರು 2022–23ನೇ ಸಾಲಿನ ಆಯವ್ಯಯದ ಬೆಂಗಳೂರು ನಗರ ಉಸ್ತುವಾರಿ ಸಚಿವರ ವಿವೇಚನೆಗೆ ಒಳಪಟ್ಟ ಅನುದಾನದ ಪಿ.3075 ಲೆಕ್ಕಶೀರ್ಷಿಕೆಯಡಿ ಮಂಜೂರಾಗಿರುವ ಕಾಮಗಾರಿಗೆ 2021–22ನೇ ಸಾಲಿನ ಲೋಕೋಪಯೋಗಿ ಇಲಾಖೆಯ ಎಸ್.ಆರ್. ದರಪಟ್ಟಿ, ಹಾಗೂ Issued rates ಅನುಸರಿಸಿ ರೂ.100.00 ಲಕ್ಷಗಳಿಗೆ ಅಂದಾಜುಪಟ್ಟಿ ತಯಾರಿಸಿ, ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಮೇಲ್ಕಂಡ ಕಾಮಗಾರಿಗೆ ಉಲ್ಲೇಖ(1)ರಲ್ಲಿ ಮಾನ್ಯ ವಿಶೇಷ ಆಯುಕ್ತರು,(ಯೋಜನೆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ. ಅದರಂತೆ ಮೇಲ್ಕಂಡ ಕಾಮಗಾರಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2021–22 ದಿ:18–01–2022 ರಂತೆ ನೀಡಿರುವ ಅಧಿಕಾರದನ್ವಯ ಈ ಕೆಳಕಂಡ ಷರತ್ತುಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಪುಟ ಸಂಖ್ಯೆ 16 ಕ್ರ.ಸಂ 47 ರಲ್ಲಿ ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
2. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
7. ಸದರಿ ಕೆಲಸವು ಎಂಬ್ಯಾಂಕ್‌ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು,
ಯಲಹಂಕ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು–64

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with CamScanner